ಬಿ.ಎಂ.ಟಿ.ಸಿ. ಬಸ್ ನಿಲ್ದಾಣ

466(988); ಶ್ರೀ ಬಸವರಾಜ್ ಬಿ.ಎ

ಅ) ಕೆ.ಆರ್ ಪುರಂನಲ್ಲಿ ಬಿ.ಎಂ.ಟಿ.ಸಿ ಬಸ್ ನಿಲ್ದಾಣವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೆ.ಆರ್. ಪುರಂನಲ್ಲಿ ಬಿ.ಎಂ.ಟಿ.ಸಿ ಬಸ್ ನಿಲ್ದಾಣವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಕೆ.ಆರ್ ಪುರಂನ ಯಾವ ಭಾಗದಲ್ಲಿ ಬಸ್ ನಿಲ್ದಾಣವನ್ನು ನಿರ್ಮಿಸಲು ಸ್ಥಳ ಗುರುತಿಸಲಾಗಿದೆ,

ಈ) ಬಿ.ಎಂ.ಟಿ.ಸಿ ಬಸ್ ನಿಲ್ದಾಣವನ್ನು ನಿರ್ಮಿಸಲು ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿದೆಯೇ,

ಉ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ನಿಗದಿಪಡಿಸಲಾಗಿದೆ?

ಶ್ರೀ ರಾಮಲಿಂಗಾ ರೆಡ್ಡಿ, (ಮಾನ್ಯ ಸಾರಿಗೆ ಸಚಿವರು)

ಅ) ಹೌದು

ಆ) ಕೆ.ಆರ್. ಪುರಂನಲ್ಲಿ ಬಿ.ಎಂ.ಟಿ.ಸಿ ಬಸ್ ನಿಲ್ದಾಣವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುತ್ತದೆ

ಇ) ಕೆ.ಆರ್.ಪುರಂ ಹಳೆಯ ಮಾರುಕಟ್ಟೆ ಯಾರ್ಡ್‌ನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿರುವ 2 ಎಕರೆ ಜಮೀನನ್ನು ಬಸ್ ನಿಲ್ದಾಣಕ್ಕಾಗಿ ಗುರುತಿಸಲಾಗಿದ್ದು, ಸದರಿ ನಿವೇಶನವನ್ನು ಹಸ್ತಾಂತರ ಮಾಡುವಂತೆ ಈಗಾಗಲೇ ಪಾಲಿಕೆಯನ್ನು ಕೋರಲಾಗಿದ್ದು, ಹಸ್ತಾಂತರವಾದಲ್ಲಿ ಬಸ್ ನಿಲ್ದಾಣ ನಿರ್ಮಾಣದ ಯೋಜನೆಯನ್ನು ರೂಪಿಸಲಾಗುವುದು;

ಈ) ಮತ್ತು ಉ) ನಿವೇಶನ ಸಂಸ್ಥೆಗೆ ಹಸ್ತಾಂತರವಾದ ನಂತರ ಸಂಸ್ಥೆಯ ಆರ್ಥಿಕ ಲಭ್ಯತೆಗನುಗುಣವಾಗಿ ಅನುದಾನ ನಿಗಧಿಪಡಿಸಲಾಗುವುದು.